ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ, ಯಾದಗಿರಿ.

ಸಿ.ಸಿ ನಂ: **1690/2023**

| | | |
|---|---|---|
| ಸಾಕ್ಷಿಯ ಹೆಸರು: | ಶಬಾನಾಬೇಗಂ | ಪ್ರಾಸಾ: 6 |
| ಗಂಡನ/ತಂದೆಯ ಹೆಸರು: | ಅಶ್ರಫ ಅಲಿ | ಚಾಸಾ: 7 |
| ವಯಸ್ಸು: | 30 ವರ್ಷ | ದಿ: 29-10-2024 |
| ಉದ್ಯೋಗ: | ಅಂಗನವಾಡಿ ಟೀಚರ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳ: | ದುಪ್ಪಲ್ಲಿ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :

ನನಗೆ ಚಾಸಾ: 1, 4 ರಿಂದ 6 ರವರ ಹಾಗೂ ಆರೋಪಿತರ ಪರಿಚಯವಿದೆ. ಸದರಿ ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಯಾವುದೆ ಹೇಳಿಕೆಯನ್ನು ನೀಡಿರುವುದಿಲ್ಲ, ಯಾವ ದಿನಾಂಕದಂದು ಏನು ಆಗಿದೆ ಎಂದು ಗೊತ್ತಿಲ್ಲ.

**(**ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲವಾಗಿ ನುಡಿಯುತ್ತಿದ್ದುದರಿಂದ ಸರಕಾರಿ ಸಹಾಯಕ ಅಭಿಯೋಜಕರು ಪಾಟಿ ಸವಾಲಿಗಾಗಿ ಅವಕಾಶ ಕೋರಿದ್ದು ನ್ಯಾಯಾಲಯದ ಮುಂದಿರುವ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು**)**

ದಿನಾಂಕ 29-12-2022 ರಂದು ಮದ್ಯಾಹ್ನ 3.00 ಗಂಟೆ ಸುಮಾರಿಗೆ ಚಾಸಾ: 1 ರವರು ಅಂಗನವಾಡಿಯಲ್ಲಿರುವಾಗ ಆರೋಪಿತನು ಅತೀ ಕ್ರಮಣ ಪ್ರವೇಶ ಮಾಡಿ, ಹೊಡೆ-ಬಡೆ ಮಾಡಿ, ಮಾನಭಂಗ ಮಾಡಲು ಪ್ರಯತ್ನಿಸಿರುತ್ತಾನೆ ಎಂದರೆ ಸರಿಯಲ್ಲ. ಆರೋಪಿತನು ಅವಾಚ್ಯ ಶಬ್ದಗಳಿಂದ ಬೈದಿರುತ್ತಾನೆ ಎಂದರೆ ಸರಿಯಲ್ಲ. ಈಗ ನಿಪಿ-7 ರಂತೆ ವಿವರವಾಗಿ ಓದಿ ಹೇಳಲಾದ ಹೇಳಿಕೆಯನ್ನು ನಾನು ಪೊಲಿಸರ ಮುಂದೆ ಹೇಳಿರುತ್ತೇನೆ ಎಂದರೆ ಸರಿಯಲ್ಲ.

ಪಾಟಿ ಸವಾಲು :ಆರೋಪಿ ಪರ ವಕೀಲರಿಂದ: ಇಲ್ಲ

ಮರುವಿಚಾರಣೆ : ಇರುವುದಿಲ್ಲ**.**

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್. ಎಫ್. ಸಿ ನ್ಯಾಯಾಲಯ ಯಾದಗಿರಿ.

ಸಿಸಿ ನಂ. **1690/2023**

| | | |
|---|---|---|
| ಸಾಕ್ಷಿಯ ಹೆಸರುಃ | ವೆಂಕಟೇಶ | ಪ್ರಾಸಾಃ 4 |
| ತಂದೆ/ಗಂಡನ ಹೆಸರುಃ | ಚಂದ್ರಪ್ಪ | ಚಾಸಾಃ 2 |
| ವಯಸ್ಸು ಃ | 45 ವರ್ಷ | ದಿಃ 29-10-2024 |
| ಉದ್ಯೋಗಃ | ಒಕ್ಕಲುತನ | ಸಾಕ್ಷಿದಾರರಿಗೆ ಪ್ರಮಾಣ ವಚನ ಭೋದಿಸಲಾಯಿತು. |
| ವಾಸ ಸ್ಥಳಃ | ದುಪ್ಪಲ್ಲಿ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ

ನನಗೆ ಚಾಸಾಃ 3 ರವರ ಪರಿಚಯ ಇಲ್ಲ. ನನಗೆ ಆರೋಪಿತರ ಪರಿಚಯ ಇದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ನುಡಿದಿರುವುದಿಲ್ಲ. ಯಾವ ದಿನದಂದು ಏನು ಆಗಿದೆ ಎಂದು ಗೊತ್ತಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನಮ್ಮು ತೋರಿಸಲಾಗಿ ಅದು ಗುನ್ನೆ ಸ್ಥಳದ ಪಂಚನಾಮೆಯಾಗಿದ್ದು ಅದನ್ನು ಸಾಕ್ಷಿಯು ನೋಡಿ ಗುರುತಿಸಿರುವುದರಿಂದ ಅದನ್ನು ನಿಪಿ-5 ಎಂದು, ಸಾಕ್ಷಿಯ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ನಕಾಶೆಯನ್ನು ನಿಪಿ-6 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು. ನಿಪಿ-5 ಮತ್ತು 6 ರಲ್ಲಿ ಏನು ಬರೆದಿರುತ್ತಾರೆ ಎಂಬುದರ ಬಗ್ಗೆ ಮಾಹಿತಿ ನನಗೆ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸರಕಾರಿ ಸಹಾಯಕ ಅಭೀಯೋಜಕರವರು ಪಾಟಿ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು ನ್ಯಾಯಾಲಯದ ಮುಂದೆ ಇರುವ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

ದಿನಾಂಕ 30-12-2022 ನನಗೆ ಮತ್ತು ಚಾಸಾಃ 3 ರವರನ್ನು ಪೋಲಿಸರು ಗುನ್ನೆ ಜಾಗೆ ಪಂಚನಾಮೆ ಸಾಕ್ಷಿದಾರಾಗಿ ಕರೆಸಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ ಸಮಕ್ಷಮದಲ್ಲಿ ನಿಪಿ-5 ಮತ್ತು 6 ರಂತೆ ಗುನ್ನೆಜಾಗೆ ಪಂಚನಾಮೆ ಜರುಗಿಸಿರುತ್ತಾರೆ ಅಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟಿ ಸವಾಲುಃ ಆರೋಪಿ ಪರ ವಕೀಲರಿಂದ ಇಲ್ಲ

ಮರು ವಿಚಾರಣೆಃ ಇಲ್ಲ

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್. ಎಫ್. ಸಿ ನ್ಯಾಯಾಲಯ ಯಾದಗಿರಿ.

ಸಿಸಿ ನಂ. **1690/2023**

| | | |
|---|---|---|
| ಸಾಕ್ಷಿಯ ಹೆಸರುಃ | ಹೇಮರೆಡ್ಡಿ | ಪ್ರಾಸಾಃ 5 |
| ತಂದೆ/ಗಂಡನ ಹೆಸರುಃ | ಅಮರಣ್ಣಗೌಡ | ಚಾಸಾಃ 3 |
| ವಯಸ್ಸು ಃ | 43 ವರ್ಷ | ದಿಃ 29-10-2024 |
| ಉದ್ಯೋಗಃ | ಒಕ್ಕಲುತನ | ಸಾಕ್ಷಿದಾರರಿಗೆ ಪ್ರಮಾಣ ವಚನ ಭೋದಿಸಲಾಯಿತು. |
| ವಾಸ ಸ್ಥಳಃ | ದುಪ್ಪಲ್ಲಿ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ

ನನಗೆ ಚಾಸಾಃ 2 ರವರ ಪರಿಚಯ ಇದೆ. ನನಗೆ ಆರೋಪಿತರ ಪರಿಚಯ ಇದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ನುಡಿದಿರುವುದಿಲ್ಲ. ಯಾವ ದಿನದಂದು ಏನು ಆಗಿದೆ ಎಂದು ಗೊತ್ತಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನಮ್ಮ ತೋರಿಸಲಾಗಿ ಅದು ಗುನ್ನೆ ಸ್ಥಳದ ಪಂಚನಾಮೆಯಾಗಿದ್ದು ಅದನ್ನು ಸಾಕ್ಷಿಯು ನೋಡಿ ಗುರುತಿಸಿರುವುದರಿಂದ ಅದನ್ನು ಈಗಾಗಲೇ ನಿಪಿ-5 ಎಂದು, ಸಾಕ್ಷಿಯ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ನಕಾಶೆಯನ್ನು ನಿಪಿ-6 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-6(ಬಿ) ಎಂದು ಗುರುತಿಸಲಾಯಿತು. ನಿಪಿ-5 ಮತ್ತು 6 ರಲ್ಲಿ ಏನು ಬರೆದಿರುತ್ತಾರೆ ಎಂಬುದರ ಬಗ್ಗೆ ಮಾಹಿತಿ ನನಗೆ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸರಕಾರಿ ಸಹಾಯಕ ಅಭಿಯೋಜಕರವರು ಪಾಟಿ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು ನ್ಯಾಯಾಲಯದ ಮುಂದೆ ಇರುವ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

ದಿನಾಂಕ 30-12-2022 ನನಗೆ ಮತ್ತು ಚಾಸಾಃ 2 ರವರನ್ನು ಪೋಲಿಸರು ಗುನ್ನೆ ಜಾಗೆ ಪಂಚನಾಮೆ ಸಾಕ್ಷಿದಾರಾಗಿ ಕರೆಸಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ ಸಮಕ್ಷಮದಲ್ಲಿ ನಿಪಿ-5 ಮತ್ತು 6 ರಂತೆ ಗುನ್ನೆಜಾಗೆ ಪಂಚನಾಮೆ ಜರುಗಿಸಿರುತ್ತಾರೆ ಅಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟಿ ಸವಾಲುಃ ಆರೋಪಿ ಪರ ವಕೀಲರಿಂದ ಇಲ್ಲ

ಮರು ವಿಚಾರಣೆಃ  ಇಲ್ಲ

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ